# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳನ್ನು ಆನ್-ಲೈನ್ ತಂತ್ರಾಂಶದ ಮೂಲಕ ನೋಂದಣಿ ಮಾಡಿಸುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯರವರ ಪತ್ರ ಸಂಖ್ಯೆ:ವಿಹಿನಿ/ ಜದಇ/ಸಿ-3/02/2019-20/672, ದಿ:15.06.2019

**<u>ಪ್ರಸ್ತಾವನೆ:</u>**

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ನೋಂದಣಿ ಪ್ರಮಾಣ ಪತ್ರವನ್ನು ಆನ್-ಲೈನ್ ತಂತ್ರಾಂಶದ ಮೂಲಕ ಸಕಾಲ ಸೇವೆ ವ್ಯಾಪ್ತಿಗೆ ತಂದು ವಿತರಿಸುವಂತೆ ಕ್ರಮವಹಿಸಲು ಮಾನ್ಯ ಮುಖ್ಯ ಕಾರ್ಯದರ್ಶಿಯವರ ದಿ:27.04.2019ರ ಪತ್ರದಲ್ಲಿ ಸೂಚಿಸಿದಂತೆ ಈಗಾಗಲೇ ವಿದ್ಯುನ್ಮಾನ ನಾಗರಿಕ ಸೇವಾ ವಿತರಣಾ ನಿರ್ದೇಶನಾಲಯ, ಇ-ಆಡಳಿತ ಇಲಾಖೆಯ ಸೇವಾ ಸಿಂಧು ಯೋಜನೆಯಡಿ ಉಚಿತವಾಗಿ ಸದರಿ ಸ್ವಯಂ ಸೇವಾ ಸಂಸ್ಥೆಗಳನ್ನು ನೋಂದಣಿ ಮಾಡಿಸಲು ಆನ್-ಲೈನ್ ತಂತ್ರಾಂಶವನ್ನು ಸಿದ್ಧಪಡಿಸಲಾಗಿದ್ದು, ಸಕಾಲ ಯೋಜನೆಯ ಮಾರ್ಗಸೂಚಿಯಂತೆ 30 ದಿನಗಳೊಳಗಾಗಿ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲು ಅನುಕೂಲವಾಗುವಂತೆ ಕ್ರಮವಹಿಸಲಾಗಿರುವ ಬಗ್ಗೆ ತಿಳಿಸಿರುತ್ತಾರೆ.

ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016 ಮತ್ತು ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣಾ ಕಾಯ್ದೆ-2007ರ ಪ್ರಕಾರ ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಹಾಗೂ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಹಂತದಲ್ಲಿ ಸ್ವಯಂ ಸೇವಾ ಸಂಸ್ಥೆಗಳಿಗೆ ನೋಂದಣಿ ಪ್ರಮಾಣ ಪತ್ರ ವಿತರಿಸುವ ಕಾರ್ಯವನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಪ್ರಸ್ತುತ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ನೋಂದಣಿ ಪ್ರಮಾಣ ಪತ್ರವನ್ನು ಆನ್-ಲೈನ್ ಮೂಲಕ ವಿತರಿಸಲು ತಂತ್ರಾಂಶ ಅಭಿವೃದ್ಧಿಪಡಿಸಿ ದಿ:18.05.2019 ಹಾಗೂ 30.05.2019ರಿಂದ ಆನ್-ಲೈನ್ ನಲ್ಲಿ ಚಾಲನೆ ನೀಡಲಾಗಿರುತ್ತದೆ. ಆದ್ದರಿಂದ ಹೊಸ ತಂತ್ರಾಂಶದ ಮೂಲಕ ಸದರಿ ಸ್ವಯಂಸೇವಾ ಸಂಸ್ಥೆಗಳಿಗೆ ಅನುವಾಗುವಂತೆ ಸರ್ಕಾರದಿಂದ ಸುತ್ತೋಲೆ/ ಆದೇಶವನ್ನು ಹೊರಡಿಸುವ ಅಗತ್ಯತೆ ಇರುವುದಾಗಿ ತಿಳಿಸಿ ಈಗಾಗಲೇ ಮ್ಯಾನುಯಲ್ ಆಗಿ ವಿತರಿಸಲಾಗುತ್ತಿರುವ ನೋಂದಣಿ ಪ್ರಮಾಣ ಪತ್ರಗಳನ್ನು ರದ್ದುಗೊಳಿಸಲು ಆದೇಶವನ್ನು ಹೊರಡಿಸುವಂತೆ ಹಾಗೂ ಹೊಸದಾಗಿ ಸೇವಾ ಸಿಂಧು ಯೋಜನೆಯಡಿ ಸಿದ್ಧಪಡಿಸಿರುವ ತಂತ್ರಾಂಶ ಬಳಸಿ ಸ್ವಯಂ ಸೇವಾ ಸಂಸ್ಥೆಗಳಿಗೆ ನೋಂದಣಿ/ ನೋಂದಣಿ ನವೀಕರಣ ಪ್ರಮಾಣ ಪತ್ರಗಳನ್ನು ವಿತರಿಸಲು ಸುತ್ತೋಲೆ/ಆದೇಶವನ್ನು ಹೊರಡಿಸುವಂತೆ ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ ಇವರು ಕೋರಿರುತ್ತಾರೆ.

**File No.WCDSEC/122/PHP/2019-WCD_SEC_C-WOMEN AND CHILD WELFARE SEC**

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 122 ಪಿಹೆಚ್‌ಪಿ 2019, ಬೆಂಗಳೂರು, ದಿನಾಂಕ: 25.11.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ನೋಂದಣಿ ಪ್ರಮಾಣ ಪತ್ರವನ್ನು ವಿದ್ಯುನ್ಮಾನ ನಾಗರಿಕ ಸೇವಾ ವಿತರಣಾ ನಿರ್ದೇಶನಾಲಯ, ಇ-ಆಡಳಿತ ಇಲಾಖೆಯ ಸೇವಾ ಸಿಂಧು ಯೋಜನೆಯಡಿ ಉಚಿತವಾಗಿ ನೋಂದಣಿ ಮಾಡಿಸಲು ಆನ್-ಲೈನ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಿರುವುದರಿಂದ, ಸದರಿ ತಂತ್ರಾಂಶ ಬಳಸಿ ಸ್ವಯಂ ಸೇವಾ ಸಂಸ್ಥೆಗಳಿಗೆ ನೋಂದಣಿ/ ನೋಂದಣಿ ನವೀಕರಣ ಪ್ರಮಾಣ ಪತ್ರಗಳನ್ನು ವಿತರಿಸಲು ಹಾಗೂ ಈಗಾಗಲೇ ಮ್ಯಾನುಯಲ್ ಆಗಿ ವಿತರಿಸಲಾಗುತ್ತಿರುವ ನೋಂದಣಿ ಪ್ರಮಾಣ ಪತ್ರಗಳನ್ನು ರದ್ದುಗೊಳಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ರಾಜಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ& ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ",ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001
4. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ(10), ವಿಧಾನ ಸೌಧ, ಬೆಂಗಳೂರು
7. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಶಾಖಾ ರಕ್ಷಾ. ಕಡತ/ ಒಡಿಜಿಸಿ/ ಹೆಚ್ಚುವರಿ ಪ್ರತಿಗಳು.